2. ಅಭ್ಯರ್ಥಿಗಳು ಎರಡು ಪತ್ರಿಕೆಗಳ ಪರೀಕ್ಷೆಗಳಿಗೆ ಹಾಜರಾಗುವುದು ಕಡ್ಡಾಯವಾಗಿರುತ್ತದೆ. ಪತ್ರಿಕೆ-1 ರ ಪಠ್ಯಕ್ರಮವು ಈ ಕೆಳಗೆ ನಿರ್ದಿಷ್ಟ ಪಡಿಸಿದಂತೆ ಇರುತ್ತದೆ. ಪತ್ರಿಕೆ-2 ಅನ್ನು ಈ ಕೆಳಗೆ ನಿರ್ದಿಷ್ಟ ಪಡಿಸಲಾದಂತೆ ಮೂರು ಭಾಗಗಳಾಗಿ ವಿಭಾಗಿಸಲಾಗಿರುತ್ತದೆ.

## ಪಠ್ಯಕ್ರಮ

ಪತ್ರಿಕೆ - 1 ಸಾಮಾನ್ಯ ಜ್ಞಾನ — ಗರಿಷ್ಠ ಅಂಕಗಳು : 100
ಅವಧಿ : 1 ½ ಗಂಟೆ

- (ಎ) ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ಸಾಮಾನ್ಯ ಜ್ಞಾನದ ವಿಷಯಗಳು
- (ಬಿ) ದೈನಂದಿನ ಗ್ರಹಿಕೆಯ ವಿಷಯಗಳು
- (ಸಿ) ಭಾರತದ ಸಂವಿಧಾನದ ಸ್ಥೂಲ ನೋಟದ ವಿಷಯಗಳು
- (ಡಿ) ವಿಶೇಷವಾಗಿ ಕರ್ನಾಟಕಕ್ಕೆ ಸಂಬಂಧಿಸಿದ ಭಾರತದ ಇತಿಹಾಸ
- (ಇ) ಕರ್ನಾಟಕಕ್ಕೆ ಸಂಬಂಧಿಸಿದಂತೆ ಭಾರತದ ಭೂಗೋಳ ವಿಷಯಗಳು
- (ಎಫ್) ರಾಜ್ಯ ಮತ್ತು ಪ್ರಾದೇಶಿಕ ಆಡಳಿತ ಕುರಿತು ವಿಷಯಗಳು
- (ಜಿ) ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್ ಸಂಸ್ಥೆಗಳು ಮತ್ತು ಗ್ರಾಮೀಣ ಸಹಕಾರ ಸಂಸ್ಥೆಗಳಿಗೆ ಸಂಬಂಧಿಸಿದ ಉಪಕ್ರಮಗಳನ್ನು ಒಳಗೊಂಡಂತೆ ಕರ್ನಾಟಕದ ಆರ್ಥಿಕತೆಯಅಭಿವೃದ್ಧಿ ಕುರಿತ ವಿಷಯಗಳು
- (ಎಚ್) ಕರ್ನಾಟಕದ ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು

**(ii)** ಪತ್ರಿಕೆ - **II** — ಗರಿಷ್ಠ ಅಂಕಗಳು : 100
ಅವಧಿ : 02 ಗಂಟೆ

| | |
|---|---|
| (ಎ) ಸಾಮಾನ್ಯ ಕನ್ನಡ | ಗರಿಷ್ಠ ಅಂಕಗಳು : 35 |
| (ಬಿ) ಸಾಮಾನ್ಯ ಇಂಗ್ಲೀಷ್ | ಗರಿಷ್ಠ ಅಂಕಗಳು : 35 |
| (ಸಿ) ಕಂಪ್ಯೂಟರ್ ಜ್ಞಾನ | ಗರಿಷ್ಠ ಅಂಕಗಳು : 30 |

**ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಮಾತ್ರ ಇರುತ್ತವೆ.**

7(2). **ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರ:-**

ಕನ್ನಡ ಭಾಷಾಪರೀಕ್ಷೆ / ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಆಯೋಗವು ನಿಗದಿಪಡಿಸುವ ಯಾವುದೇ ಕೇಂದ್ರಸ್ಥಳದಲ್ಲಿ ನಡೆಸಲಾಗುವುದು ಹಾಗೂ ಕನ್ನಡ ಭಾಷೆಯಲ್ಲಿರುವ ಪ್ರಶ್ನೆಗಳ ಭಾಷಾಂತರದಲ್ಲಿ ಏನಾದರೂ ಅಸ್ಪಷ್ಟತೆ ಇದ್ದಲ್ಲಿ ಅಭ್ಯರ್ಥಿಗಳು ಆಂಗ್ಲ ಭಾಷೆಯಲ್ಲಿರುವ ಪ್ರಶ್ನೆಗಳನ್ನು ನೋಡಿ ಅರ್ಥೈಸಿಕೊಳ್ಳುವುದು.

ಕನ್ನಡ ಭಾಷಾ ಪರೀಕ್ಷೆ / ಸ್ಪರ್ಧಾತ್ಮಕ ಪರೀಕ್ಷೆಗಳ ವೇಳಾ ಪಟ್ಟಿಯನ್ನು ನಂತರದಲ್ಲಿ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

## 8. ವಿಶೇಷ ಸೂಚನೆಗಳು:-

ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗೆ ಅವರ ಪ್ರವೇಶ ಪತ್ರ ಹಾಗೂ ಅವರ ಭಾವಚಿತ್ರವಿರುವ ಮೂಲ ಗುರುತಿನ ಚೀಟಿ (ಚುನಾವಣಾ ಐಡಿ/ ಆಧಾರ್ಕಾರ್ಡ್ / ಡ್ರೈವಿಂಗ್ಲೈಸನ್ಸ್/ಪಾನ್ಕಾರ್ಡ್/ಪಾಸ್ಪೋರ್ಟ್ / ಸರ್ಕಾರಿ ನೌಕರರ ಐಡಿ) ಯನ್ನು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಪರೀಕ್ಷಾ ಕೇಂದ್ರಕ್ಕೆ ಪ್ರವೇಶವನ್ನು ನೀಡಲಾಗುವುದಿಲ್ಲ ಹಾಗೂ ಡೌನ್‌ಲೋಡ್ ಮಾಡಿರುವ ಗುರುತಿನ ಚೀಟಿಗಳು / ಇತರೆ ಯಾವುದೇ ಗುರುತಿನ ಚೀಟಿಗಳು/ ಕಲರ್ ಜೆರಾಕ್ಸ್ ಪ್ರತಿಗಳನ್ನುಪರಿಗಣಿಸಲಾಗುವುದಿಲ್ಲ. ಸದರಿ ಹುದ್ದೆಗಳ ನೇಮಕಾತಿಗಳ ಸ್ಪರ್ಧಾತ್ಮಕ ಪರೀಕ್ಷೆಯನ್ನುಆಫ್ ಲೈನ್–ಓಎಂಆರ್ ಮಾದರಿ(Offline-OMR type)ಅಥವಾ ಗಣಕಯಂತ್ರದ ಮೂಲಕ ಸ್ಪರ್ಧಾತ್ಮಕ ಪರೀಕ್ಷೆ(Computer based recruitment test-CBRT) ಮುಖಾಂತರ ನಡೆಸಲಾಗುವುದು. ಈ ವಿಷಯದಲ್ಲಿ ಆಯೋಗದ ತೀರ್ಮಾನವೇ ಅಂತಿಮವಾಗಿರುತ್ತದೆ. ಗಣಕಯಂತ್ರದ ಮೂಲಕ ಸ್ಪರ್ಧಾತ್ಮಕ(Computer based recruitment test-CBRT) ಪರೀಕ್ಷೆಯನ್ನು ನಡೆಸಲು ತೀರ್ಮಾನಿಸಿದಲ್ಲಿ ಅಭ್ಯರ್ಥಿಗಳಿಗೆ ಈ ಸಂಬಂಧ ಸೂಚನೆಗಳನ್ನು ಹಾಗೂ ಅಣಕು ಪರೀಕ್ಷೆಯನ್ನು(Mock Test) ತೆಗೆದುಕೊಳ್ಳುವ ಬಗ್ಗೆ ಮಾಹಿತಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

**ಸೂಚನೆ:-ಕನ್ನಡ ಭಾಷಾ ಪರೀಕ್ಷೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಯ ಪಠ್ಯಕ್ರಮ ವಿವರಗಳನ್ನು ಆಯೋಗದ ವೆಬ್‌ಸೈಟ್ http://kpsc.kar.nic.in/ Syllabus ಲಿಂಕ್‌ನಲ್ಲಿ ಬಿತ್ತರಿಸಲಾಗಿದೆ.**

ಅಭ್ಯರ್ಥಿಗಳು ಪರೀಕ್ಷೆಯ ಪ್ರವೇಶ ಪತ್ರಗಳನ್ನು ಆಯೋಗದ ವೆಬ್‌ಸೈಟ್‌ನಿಂದ ಡೌನ್ ಲೋಡ್ ಮಾಡಿಕೊಳ್ಳಲು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಆಯೋಗದ ವೆಬ್ ಸೈಟ್ ನಲ್ಲಿಯೂ ಬಿತ್ತರಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಂಡು ಪರೀಕ್ಷೆಗೆ ಹಾಜರಾಗತಕ್ಕದ್ದು.

**ಟಿಪ್ಪಣಿ:-**ಪ್ರಶ್ನೆ ಪತ್ರಿಕೆ ಬಗ್ಗೆ ಯಾವುದೇ ಬಗೆಯ ಆಕ್ಷೇಪಣೆ ಇದ್ದಲ್ಲಿ, ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲೇ ಪರೀಕ್ಷಾದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಲಿಖಿತ ಮನವಿಯನ್ನು ಆಯೋಗಕ್ಕೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ.

## 9. ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:-

**9 (1) ಶೈಕ್ಷಣಿಕ ವಿದ್ಯಾರ್ಹತೆ-ಅರ್ಜಿಗಳನ್ನು ಭರ್ತಿಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ನಮೂದಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೆ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದರೂ ಸಹ ಪರಿಗಣಿಸಲಾಗುವುದಿಲ್ಲ.**

**9 (2) ವಯೋಮಿತಿ:- ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ನಮೂದಿಸಿರುವ ಕನಿಷ್ಟ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಟ ವಯೋಮಿತಿಯನ್ನುಮೀರಿರಬಾರದು.**